
## ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಮ್ಮೇಳನ | ಸಿದ್ದರಾಮಯ್ಯ, ಡಿಕೆಶಿಗೆ ಬೆಳ್ಳಿ ಕಿರೀಟ ತೊಡಿಸಿ ಸನ್ಮಾನ

# ಸೆ.13 ಸರ್ಕಾರಿ ಮಹಿಳಾ ನೌಕರರ ದಿನ ಸಿಎಂ ಭರವಸೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಮಹಿಳಾ ಸಂಘಟನೆ ಶುರು ಮಾಡಿದ ಮೇರಿ ದೇವಾಸಿಯ ಜನ್ಮದಿನವಾದ ಸೆ.13ರಂದು ಸರ್ಕಾರಿ ಮಹಿಳಾ ನೌಕರರ ದಿನವೆಂದು ಘೋಷಣೆ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘ ಗುರುವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ಮಹಿಳಾ ನೌಕರರ ಸಮ್ಮೇಳನ ಮತ್ತು ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳಾ ಸಬಲೀಕರಣಕ್ಕೆ ಸರ್ಕಾರ ಬದ್ಧವಾಗಿದೆ. ಸಂಘದ ಮನವಿಗೂ ಸಮ್ಮತಿಸಿದ್ದು, ಸೆ.13ರಂದು ಸರ್ಕಾರಿ ಮಹಿಳಾ ನೌಕರರ ದಿನಾಚರಣೆ ಎಂದು ಘೋಷಣೆ ಮಾಡಲಾಗುತ್ತದೆ. ಆದರೆ, ಯಾವುದೇ ಕಾರಣಕ್ಕೂ ರಜೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಜತೆಗೆ ಸಂಘವನ್ನು ಅಧಿಕೃತಗೊಳಿಸುವ ನಿಟ್ಟಿನಲ್ಲಿ ಕಾಯ್ದೆ ರೂಪಿಸುವುದು ಮತ್ತು ಕಬ್ಬನ್ ಪಾರ್ಕ್‌ನ ಬಾಲಭವನದಲ್ಲಿ ಕಚೇರಿ ತೆರೆಯಲು ಸ್ಥಳಾವಕಾಶ ಮಾಡಿಕೊಡುವುದಾಗಿ ವಾಗ್ದಾನ ನೀಡಿದರು.




ವಿಧಾನಸೌಧದಲ್ಲಿ ಗುರುವಾರ ನಡೆದ ಮಹಿಳಾ ನೌಕರರ ಸಮ್ಮೇಳನದಲ್ಲಿ ಮಹಿಳೆಯರಿಗೆ ರಾಜ್ಯ ಸರ್ಕಾರ ಘೋಷಿಸಿರುವ ಋತುಚಕ್ರ ರಜೆ ಆದೇಶ ಪ್ರತಿ ಪ್ರದರ್ಶಿಸಲಾಯಿತು. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಸಭಾಪತಿ ಬಸವರಾಜ ಹೊರಟ್ಟಿ, ಸರ್ಕಾರಿ ಮಹಿಳಾ ನೌಕರರ ಸಂಘದ ಅಧ್ಯಕ್ಷೆ ರೋಶಿನಿ ಗೌಡ ಇದ್ದರು.

ಲಿಂಗ ತಾರತಮ್ಯ ನಿರ್ಮೂಲನೆಗೆ ಸರ್ಕಾರ ಅನೇಕ ಯೋಜನೆ ಜಾರಿಗೆ ತಂದಿದೆ. ಸ್ವಾತಂತ್ರ್ಯ ಬಂದಾಗ ದೇಶದಲ್ಲಿ ಶೇ.10-12 ಸಾಕ್ಷರತೆ ಪ್ರಮಾಣವಿತ್ತು. ಪ್ರಸ್ತುತ ಶೇ.72ಕ್ಕೆ ಏರಿಕೆಯಾಗಿದ್ದು, ಇದನ್ನು ಶೇ.100ಕ್ಕೆ ತಲುಪಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು. ತಾಯಂದಿರು ತಮ್ಮ ಮಕ್ಕಳಲ್ಲಿ ವೈಚಾರಿಕತೆ ಮತ್ತು ವೈಜ್ಞಾನಿಕತೆ ಬೆಳೆಸುವ ಕೆಲಸ ಮಾಡಬೇಕು. ಮೂಢನಂಬಿಕೆ, ಅಂಧಶ್ರದ್ಧೆಯಿಂದ ದೂರ ಇರುವಂತೆ ಮಕ್ಕಳನ್ನು ಬೆಳೆಸಬೇಕು. ಆಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯವೆಂದು ಮಹಿಳೆಯರಿಗೆ ಸಿದ್ದರಾಮಯ್ಯ ತಿಳಿವಳಿಕೆ ನೀಡಿದರು.

ಇದೇ ವೇಳೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, 40 ವರ್ಷಗಳಿಂದ ಈ ಸಂಘವನ್ನು ಗಮನಿಸಿಕೊಂಡು ಬಂದಿದ್ದೇನೆ. ನಿಮ್ಮ ಒಗ್ಗಟ್ಟು ಬಿಡಬೇಡಿ. ಲಿಂಗಾಯತರ, ಹಿಂದುಳಿದ ವರ್ಗಗಳ, ಒಕ್ಕಲಿಗರ, ಪರಿಶಿಷ್ಟ ಜಾತಿ ಹಾಗೂ ವರ್ಗಗಳ ಸಂಘ ಎಂದು ಜಾತಿ ಆಧಾರದ ಮೇಲೆ ಸಂಘಟನೆ ಮಾಡಬೇಡಿ. ಈ ಆಲೋಚನೆಯನ್ನು ನಿಮ್ಮ ತಲೆಯಿಂದ ತೆಗೆದುಹಾಕಿ. ಯಾವುದೇ ಪರಿಸ್ಥಿತಿಯಲ್ಲಿ ಇದ್ದರೂ ಜಾತಿ ಆಧಾರದ ಮೇಲೆ ಸಂಘಟನೆ ಮಾಡಬೇಡಿ, ಮಹಿಳಾ ಶಕ್ತಿ ಮೇಲೆ ಸಂಘಟನೆ ಮಾಡಿ ಎಂದು ಕಿವಿ ಮಾತು ಹೇಳಿದರು.

ನಾಯಕತ್ವ ಗುಣ ಬೆಳೆಸಿಕೊಂಡು ನಾಯಕಿಯರಾಗಬೇಕು. ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಿದ್ದು ಕಾಂಗ್ರೆಸ್. ಪಂಚಾಯಿತಿಯಲ್ಲಿ ಶೇ.50 ಮೀಸಲಾತಿ ನೀಡಲಾಗಿದ್ದು, ಸಂಸತ್ ಚುನಾವಣೆಯಲ್ಲಿ ಶೇ.33 ಜಾರಿಯಾಗುವ ಹಂತದಲ್ಲಿದೆ. ಇದರಿಂದ ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲಿ 70 ಕ್ಷೇತ್ರಗಳಲ್ಲಿ ಮಹಿಳಾ ಶಾಸಕಿಯರು ಆಯ್ಕೆಯಾಗಲಿದ್ದಾರೆ. ನಾಯಕತ್ವ ಗುಣ ಇರುವ ಸರ್ಕಾರಿ ಮಹಿಳಾ ನೌಕರರಿಗೆ ನಾವು ಟಿಕೆಟ್ ನೀಡಿ ಗೆಲ್ಲಿಸಿದ್ದೇವೆ. ಹಲವರು ಶಾಸಕಿಯರಾಗಿದ್ದಾರೆ ಎಂದು ಸ್ಮರಿಸಿದರು. ಸಚಿವರಾದ ಎಚ್.ಕೆ. ಪಾಟೀಲ್ ದಿನೇಶ್ ಗುಂಡೂರಾವ್, ವಿಧಾನ ಪರಿಷತ್ ಸದಸ್ಯ ಮತ್ತಿತರು ಉಪಸ್ಥಿತರಿದ್ದರು.



ವಿಧಾನಸೌಧದಲ್ಲಿ ಯೋಜನೆ ರೂಪಿಸಿದರೂ ಅದನ್ನು ಕಾರ್ಯರೂಪಕ್ಕೆ ತರುವುದು ಸರ್ಕಾರಿ ನೌಕರರು. ಸರ್ಕಾರದ ಯೋಜನೆಗಳ ಯಶಸ್ಸಿನಲ್ಲಿ ನೌಕರರ ಪಾತ್ರ ದೊಡ್ಡದು.

| ಲಕ್ಷ್ಮೀ ಹೆಬ್ಬಾಳ್ಕರ್

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ

### ಮಹಿಳಾ ಸಂಘದ ಮನವಿಗಳು

8ನೇ ವೇತನ ಆಯೋಗ ಜಾರಿ, ಒಪಿಎಸ್ ಜಾರಿ, ಮಾತೃತ್ವ ರಜೆ 1 ವರ್ಷ ವಿಸ್ತರಣೆ, ಗರ್ಭಿಣಿ ನೌಕರರಿಗೆ ವೈದ್ಯಕೀಯ ಪರೀಕ್ಷೆಗಾಗಿ 1 ದಿನ ವೇತನ ಸಹಿತ ರಜೆ ನೀಡಬೇಕೆಂದು ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಅಧ್ಯಕ್ಷೆ ರೋಶಿನಿ ಗೌಡ ಮನವಿ ಮಾಡಿದರು. ಇದಲ್ಲದೆ, ಮಹಿಳಾ ಸಂಘಟನೆ ಶುರು ಮಾಡಿದ ಮೇರಿ ದೇವಾಸಿಯ ಜನ್ಮದಿನವಾದ ಸೆಪ್ಟೆಂಬರ್ 13ರಂದು ರಜೆ ಮತ್ತು ಸರ್ಕಾರಿ ಮಹಿಳಾ ನೌಕರರ ದಿನಾಚರಣೆ ಎಂದು ಘೋಷಣೆ ಮಾಡಬೇಕು, ಮಹಿಳಾ ನೌಕರರಿಗೆ ಹಬ್ಬದ ಮುಂಗಡ 50 ಸಾವಿರ ರೂ.ಗೆ ಹೆಚ್ಚಿಸುವುದು, ವಿದೇಶ ಪ್ರವಾಸಕ್ಕೆ ಅರ್ಜಿ ಸಲ್ಲಿಸಿದವರಿಗೆ 15 ದಿನದಲ್ಲಿ ಮಂಜೂರು, ಸಂಘಕ್ಕೆ ಅಧಿಕೃತ ಮಾನ್ಯತೆ ಮತ್ತು ಕಚೇರಿಗೆ ಸ್ಥಳ ನೀಡಬೇಕೆಂದು ಸಿಎಂ ಬಳಿ ಮನವಿ ಮಾಡಿದರು.

## ಮಹಿಳಾ ಸಮ್ಮೇಳನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

# ಸೆ. 13 ಮಹಿಳಾ ನೌಕರರ ದಿನವಾಗಿ ಘೋಷಣೆ

■ **ವಿಕ ಸುದ್ದಿಲೋಕ** ಬೆಂಗಳೂರು


ಸರಕಾರದ ಆಡಳಿತ ಯಂತ್ರದಲ್ಲಿ ಮಹಿಳಾ ನೌಕರರ ಕೊಡುಗೆ ಗಣನೀಯವಾಗಿದ್ದು, ಸೆಪ್ಟೆಂಬರ್ 13ರಂದು ಮಹಿಳಾ ನೌಕರರ ದಿನವನ್ನಾಗಿ ಆಚರಿಸಲು ಘೋಷಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಮಹಿಳಾ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

''ಎಲ್ಲ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರು ಪುರುಷರಿಗೆ ಸರಿಸಮನಾಗಿ ಸೇವೆ ಸಲ್ಲಿಸುತ್ತಿದ್ದಾರೆ. ರಾಜ್ಯದಲ್ಲಿ ಲಿಂಗ ತಾರತಮ್ಯ ಹೋಗಲಾಡಿಸಿ, ಎಲ್ಲರನ್ನೂ ಸಮಾನವಾಗಿ ಕಾಣಲು ನಮ್ಮ ಸರಕಾರ ಬದ್ಧವಾಗಿದೆ,'' ಎಂದು ಹೇಳಿದರು.

''ಮಹಿಳೆಯರು ವೈಚಾರಿಕ ಮತ್ತು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು. ಸಾಧ್ಯವಾದಷ್ಟು ಮಟ್ಟಿಗೆ ಮೂಢ ನಂಬಿಕೆಗಳು ಮತ್ತು ಅಂಧ ಶ್ರದ್ಧೆಗಳಿಂದ ದೂರವಿರಬೇಕು. ಮಕ್ಕಳನ್ನು ಇದೇ ಮಾರ್ಗದಲ್ಲಿ ಬೆಳೆಸಬೇಕು. ಸಮಾಜದಲ್ಲಿ ಅನೇಕ ಜಾತಿ, ಧರ್ಮಗಳಿವೆ. ಯಾವುದೇ ಕಾರಣಕ್ಕೂ ಮಕ್ಕಳಿಗೆ ಜಾತಿಯನ್ನು ಮುಂದಿಟ್ಟುಕೊಂಡು ಜಾತೀಯತೆ ತುಂಬುವ ಕೆಲಸ ಮಾಡಬಾರದು,'' ಎಂದು ಸಲಹೆ ಮಾಡಿದರು.

''ಇನ್ನು, ಸಂಘದ ಕಚೇರಿಯ ಕಾರ್ಯ ಚಟುವಟಿಕೆಗಳಿಗೆ ಬಾಲಭವನದಲ್ಲಿ ಸ್ಥಳಾವಕಾಶ ನೀಡುವ ಸಂಬಂಧ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರೊಂದಿಗೆ ಚರ್ಚಿಸಿದ್ದು, ಶೀಘ್ರವೇ ಈ ಬಗ್ಗೆ ನಿರ್ಧಾರ ಪ್ರಕಟವಾಗಲಿದೆ,'' ಎಂದು ತಿಳಿಸಿದರು.




ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಮಹಿಳಾ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ , ಡಿಸಿಎಂ ಡಿ.ಕೆ. ಶಿವಕುಮಾರ್, ಸಚಿವ ಎಚ್.ಕೆ. ಪಾಟೀಲ್ ಭಾಗವಹಿಸಿದ್ದರು.

**ಜಾತಿ ಆಧಾರದಲ್ಲಿ ಸಂಘಟನೆ ಬೇಡ:** ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ''ಮಹಿಳಾ ನೌಕರರು ತಮ್ಮ ಶಕ್ತಿ ಆಧಾರದ ಮೇಲೆ ಸಂಘಟನೆ ಮಾಡಬೇಕೇ ಹೊರತು ಜಾತಿ ಆಧಾರದಲ್ಲಿ ಸಂಘಟನೆ ಮಾಡಬಾರದು. ಸಂಘಟನೆ ಬಹಳ ಮುಖ್ಯ. ಮಹಿಳಾ ನೌಕರರು ಒಗ್ಗಟ್ಟು ಪ್ರದರ್ಶಿಸಬೇಕು. ಜಾತಿ ಆಧಾರಿತ ಸಂಘಟನೆ ಆಲೋಚನೆಯಿದ್ದರೆ, ಈಗಲೇ ಮನಸ್ಸಿನಿಂದ ತೆಗೆದು ಹಾಕಿ,'' ಎಂದು ಸಲಹೆ ನೀಡಿದರು.

''ಮಹಿಳೆಯರ ಕೊಡುಗೆ ಇಲ್ಲದೆ ಯಾವೊಬ್ಬ ವ್ಯಕ್ತಿಯೂ ಯಶಸ್ವಿಯಾಗಲಾರ. ನಾವೆಲ್ಲ ರಾಜಕಾರಣ ಮಾಡಿಕೊಂಡು ಮನೆಗೆ ಸಮಯ ನೀಡುವುದಿಲ್ಲ. ನಮ್ಮ ಮನೆ ನಡೆಸಿ ನಿಭಾಯಿಸುತ್ತಿರುವವರು ಮಹಿಳೆಯರು. ದೂರಿನ ಪೆಟ್ಟಿಗೆಯಾಗದೇ ತಮ್ಮ ಹಕ್ಕನ್ನು ಚಲಾಯಿಸಬೇಕು. ನಾಯಕತ್ವ ಗುಣ ಬೆಳೆಸಿಕೊಂಡು ಜನರ ಆಶೋತ್ತರಗಳನ್ನು ಈಡೇರಿಸುವ ನಾಯಕಿಯರಾಗಿ ಬೆಳೆಯಬೇಕು,'' ಎಂದರು.

''ಮಹಿಳಾ ನೌಕರರ ಮನವಿಯಂತೆ ಸಂಘಕ್ಕೆ ಅಗತ್ಯ ಭೂಮಿ ಒದಗಿಸಲಾಗುವುದು. ಮುಂದಿನ ವರ್ಷ ಅರಮನೆ ಮೈದಾನದಲ್ಲಿ ದೊಡ್ಡ ಮಟ್ಟದ ಮಹಿಳಾ ಸಮಾವೇಶ ಮಾಡಲು ರೂಪುರೇಷೆ ಸಿದ್ಧಮಾಡಿಕೊಳ್ಳಿ. ಅದಕ್ಕೆ ಸರಕಾರದಿಂದ ಆರ್ಥಿಕ ನೆರವು ನೀಡಲಾಗುವುದು,'' ಎಂದು ಡಿಸಿಎಂ ಭರವಸೆ ನೀಡಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಎಚ್.ಕೆ. ಪಾಟೀಲ್, ದಿನೇಶ್ ಗುಂಡೂರಾವ್, ಲಕ್ಷ್ಮೀ ಹೆಬ್ಬಾಳ್ಕರ್, ಕರ್ನಾಟಕ ಕಾನೂನು ಆಯೋಗದ ಅಧ್ಯಕ್ಷ ಅಶೋಕ್ ಬಿ. ಹಿಂಚಿಗೇರಿ, ಮಾಜಿ ಸಂಸದ ವಿ.ಎಸ್. ಉಗ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ, ಬಲ್ಕಿಷ್ ಬಾನು, ಆರತಿ ಕೃಷ್ಣ, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ, ಮಾಜಿ ಶಾಸಕಿ ಸೌಮ್ಯಾ ರೆಡ್ಡಿ, ಮಹಿಳಾ ನೌಕರರ ಸಂಘದ ಅಧ್ಯಕ್ಷೆ ರೋಶನಿಗೌಡ ಉಪಸ್ಥಿತರಿದ್ದರು.